ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803

ಅಂತರ್ಜಾಲ:https://kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿಒ25521**

**ಕಂಪನಿ ಅಧಿಕೃತ ಕಛೇರಿ:** ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು 560 009.

**ಸಂಖ್ಯೆ:ಕವಿಪ್ರನಿನಿ/ಬಿ5/9655/2020-21** **ದಿನಾಂಕ:** 07 MAY 2021

## ಸುತ್ತೋಲೆ

**ವಿಷಯ:** ಸಿಬ್ಬಂದಿಯು ಕಡ್ಡಾಯವಾಗಿ ಗುರುತಿನ ಚೀಟಿಯನ್ನು ಧರಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ ರವರ ಅ.ಸ.ಪತ್ರ ಸಂಖ್ಯೆ:ಸಿಆಸುಇ 12 ಕತವ 2021 ದಿನಾಂಕ; 16.03.2021.
2. ನಿಗಮದ ಸುತ್ತೋಲೆ ಸಮ ಸಂಖ್ಯೆ ದಿನಾಂಕ; 08.12.2020.
3. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 87 ಕತವ 2020 ದಿನಾಂಕ; 03.11.2020.

-----

ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಕರ್ತವ್ಯದ ಅವಧಿಯಲ್ಲಿ ಸಿಬ್ಬಂದಿಯು ಕಡ್ಡಾಯವಾಗಿ ಇಲಾಖೆಯಿಂದ ಪಡೆದ ಗುರುತಿನ ಚೀಟಿಯನ್ನು ಧರಿಸುವ ಮತ್ತು ಸಿಬ್ಬಂದಿಯು ಕರ್ತವ್ಯ ನಿರ್ವಹಿಸುವ ಮೇಜಿನ ಮೇಲೆ ಅಧಿಕಾರಿ/ಸಿಬ್ಬಂದಿಯ ಹೆಸರು ಮತ್ತು ಹುದ್ದೆ ಸೂಚಿಸುವ ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸಿ ಸಾರ್ವಜನಿಕ ಸೇವೆಯಲ್ಲಿ ಪಾರದರ್ಶಕತೆಯನ್ನು ತರಲು ಕ್ರಮವನ್ನು ಕೈಗೊಳ್ಳಲು ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 87 ಕತವ 2020 ದಿನಾಂಕ; 03.11.2020 ರಲ್ಲಿ ಸೂಚಿಸಿದ್ದ ಹಿನ್ನೆಲೆಯಲ್ಲಿ, ಸರ್ಕಾರದ ದಿನಾಂಕ;03.11.2020 ರ ಆದೇಶದಲ್ಲಿನ ಸೂಚನೆಗಳಂತೆ ರಾಜ್ಯಾದ್ಯಂತ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಎಲ್ಲಾ ಕಛೇರಿಗಳ ಮುಖ್ಯಸ್ಥರುಗಳು ಕ್ರಮಗಳನ್ನು ಜರುಗಿಸಲು ಮತ್ತು ಅಧೀನದಲ್ಲಿನ ಸಿಬ್ಬಂದಿಗಳಿಗೆ ಆದೇಶವನ್ನು ತಪ್ಪದೇ ಪಾಲಿಸುವಂತೆ ಸೂಕ್ತ ಸೂಚನೆಗಳನ್ನು ನೀಡಲು ನಿಗಮದ ದಿನಾಂಕ; 08.12.2020 ರ ಸುತ್ತೋಲೆಯಲ್ಲಿ ಸೂಚಿಸಲಾಗಿತ್ತು.

ಆದರೂ ಸಹ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕಛೇರಿಗಳ ಹಲವು ಅಧಿಕಾರಿ/ನೌಕರರು ಗುರುತಿನ ಚೀಟಿಯನ್ನು ಧರಿಸದೇ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಇದರಿಂದಾಗಿ ಸಾರ್ವಜನಿಕರಿಗೆ ನಿರ್ದಿಷ್ಟ ಅಧಿಕಾರಿ/ಸಿಬ್ಬಂದಿಯನ್ನು ಗುರುತಿಸಿ ಭೇಟಿಯಾಗಲು ಕಷ್ಟವಾಗುತ್ತಿರುವುದಾಗಿ ತಿಳಿಸುತ್ತಾ, ಎಲ್ಲಾ ಅಧಿಕಾರಿಗಳು/ನೌಕರರು ಕರ್ತವ್ಯದ ಅವಧಿಯಲ್ಲಿ ಕಡ್ಡಾಯವಾಗಿ ಗುರುತಿನ ಚೀಟಿಯನ್ನು ಧರಿಸುವಂತೆ ಉಲ್ಲೇಖ-1 ರ ಪತ್ರದಲ್ಲಿ ಸೂಚಿಸಲಾಗಿದೆ. ಆದ್ದರಿಂದ, ಈ ಸೂಚನೆಗಳನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಎಲ್ಲಾ ಅಧಿಕಾರಿಗಳು ಮತ್ತು ನೌಕರರು ತಪ್ಪದೇ ಪಾಲಿಸಲು ಪುನ: ಸೂಚಿಸಲಾಗಿದೆ.

**ನಿರ್ದೇಶಕರು(ಆಡಳಿತ ಮತ್ತು ಮಾ.ಸಂ),**
**ಕವಿಪ್ರನಿನಿ.**

**ಪ್ರತಿಗಳು:**
1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ/ಪಿಸಿಕೆಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ.
3. ಎಲ್ಲಾ ಮುಖ್ಯ ಇಂಜಿನಿಯರ್(ವಿ)/ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
4. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆಡಳಿತ ಮತ್ತು ಮಾ.ಸಂ.) ರವರ ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ **https://kptcl.karnataka.gov.in-->eprasarana** ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

5. ಎಲ್ಲಾ ಅಧೀಕ್ಷಕ ಇಂಜಿನಿಯರ್ / ನಿಯಂತ್ರಣಾಧಿಕಾರಿ, ಕವಿಪ್ರನಿನಿ.
6. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ.
7. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ.), ಕವಿಪ್ರನಿನಿ.
8. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**<u>ಪ್ರತಿಗಳು ಮಾಹಿತಿಗಾಗಿ:</u>**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕ.ವಿ.ಪ್ರ.ನಿ.ನಿ. / ಎಸ್ಕಾಂ ಪ.ಜಾ. /ಪ. ಪಂ. ಅಧಿಕಾರಿಗಳ ಸಂಘ, ಬೆಂಗಳೂರು.